# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/103/2015-16 ದಿನಾಂಕ :27-07-2016.

ಉಪಸ್ಥಿತರು:–ವಿ.ಹೆಚ್.ಮಲ್ಲಿಕಾರ್ಜುನ,
ಉಪತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| 1. ಶ್ರೀ ಮರಳು ಸಿದ್ದಪ್ಪ ತಂದೆ ಲೇಟ್ ಸಿದ್ಲಿಂಗಪ್ಪ<br>2. ಶ್ರೀ ಗಿರೀಶ ತಂದೆ ಲೇಟ್ ಸಿದ್ಲಿಂಗಪ್ಪ<br>ಗ್ರಾಮ:–ಸಂಗಮೇಶ್ವರ ತಾ:–ಹ.ಬೊ.ಹಳ್ಳಿ | 1. ಶ್ರೀಮತಿ ಅನುರಾಧಮ್ಮ ಗಂಡ ಲೇಟ್ ಸಿದ್ಲಿಂಗಪ್ಪ<br>ಗ್ರಾಮ:–ಸಂಗಮೇಶ್ವರ ತಾ:–ಹ.ಬೊ.ಹಳ್ಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಕುಡಿತಿನಮಗ್ಗಿ | 231/ಸಿ | 7–20 | ಖುಷ್ಕಿ |
| 2. | " | " | 214 | 5–26 | " |
| 3. | " | " | 285 | 0–13 | " |
| 4. | " | " | 286 | 0–20 | " |
| 5. | " | " | 287 | 0–16 | " |
| 6. | " | " | 289 | 0–16 | " |
| 7. | " | " | 290 | 0–19 | " |
| 8. | " | " | 291 | 0–18 | " |
| 9. | " | " | 375/ಡಿ | 0–54 | " |
| 10. | " | " | 375/ಇ | 0–34 | " |
| 11. | " | " | 375/ಹೆಚ್ | 0–19 | " |

**ಪೀಠಿಕೆ:–**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕುಡುತಿನಮಗ್ಗಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಸಂಗಮೇಶ್ವರ ಗ್ರಾಮದ ನಿವಾಸಿಯಾದ ಶ್ರೀ ಮರಳು ಸಿದ್ದಪ್ಪ ತಂದೆ ಲೇಟ್ ಸಿದ್ಲಿಂಗಪ್ಪ, ಗಿರೀಶ ತಂದೆ ಲೇಟ್ ಸಿದ್ಲಿಂಗಪ್ಪ ಇವರು ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:02.02.2016 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ–21ರ ನೋಟೀಸನ್ನು ದಿನಾಂಕ:04.02.2016 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:09.02.2016 ರಂದು ಅನುರಾಧಮ್ಮ ಗಂಡ ಲೇಟ್ ಸಿದ್ಲಿಂಗಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.37/15–16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ರವರು ಈ ಕಾರ್ಯಾಲಯಕ್ಕೆ ವರದಿಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:03.05.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪುಟ–2ಕ್ಕೆ...

ಪ್ರಕರಣವನ್ನು ದಿನಾಂಕ:03.05.2016 ರಿಂದ 14.07.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹೇಳುವಂತೆ; ಸದರಿ ಜಮೀನು ನಮ್ಮ ತಂದೆಯವರ ಪಿತ್ರಾರ್ಜಿತ ಆಸ್ತಿಯಾಗಿರುತ್ತದೆ. ನಮ್ಮ ತಾಯಿಯವರು ಅಂದರೆ ತಕರಾರುದಾರರು ಪಾಲು ವಿಭಾಗ ಮಾಡಿಕೊಟ್ಟಿರುತ್ತಾರೆ. ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ತಕರಾರುದಾರರು ಹಾಜರಾಗಿ ಹೇಳುವಂತೆ; ಪ್ರಕರಣವನ್ನು ಯಥಾಸ್ಥಿತಿ ಕಾಯ್ದುಕೊಳ್ಳಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.37/2015-16ರ ಪ್ರಕರಣದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:27.07.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

[ವಿ.ಹೆಚ್.ಮಲ್ಲಿಕಾರ್ಜುನ] 27/7/16
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಉಪ ತಹಶೀಲ್ದಾರರು,
ನಾಡ ಕಛೇರಿ, ಕೋಗಳಿ

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.